ಮಾನ್ಯ ಮಂತ್ರಿಗಳು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು.

ಶ್ರೀ ಸಿ.ಟಿ. ರವಿ (ಉನ್ನತ ಶಿಕ್ಷಣ ಸಚಿವರು) :– ಮಾನ್ಯ ಅಧ್ಯಕ್ಷರೆ, 2012ನೇ ಸಾಲಿನ ಶರಣ ಬಸವ ವಿಶ್ವವಿದ್ಯಾಲಯ ವಿಧೇಯಕವನ್ನು ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ–3)

3. ಆದಿಚುಂಚನಗಿರಿ ವಿಶ್ವವಿದ್ಯಾಲಯ ವಿಧೇಯಕ, 2012 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಸಿ.ಟಿ. ರವಿ (ಉನ್ನತ ಶಿಕ್ಷಣ ಸಚಿವರು) : ಮಾನ್ಯ ಅಧ್ಯಕ್ಷರೆ, 2012ನೇ ಸಾಲಿನ ಆದಿಚುಂಚನಗಿರಿ ವಿಶ್ವವಿದ್ಯಾಲಯ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವನೆ ಮಂಡಿಸಲಾಯಿತು.

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ:

2012ನೇ ಸಾಲಿನ ಆದಿಚುಂಚನಗಿರಿ ವಿಶ್ವವಿದ್ಯಾಲಯ ವಿಧೇಯ ಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು"ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ"ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು ಅಂಗೀಕೃತವಾಗಿದೆ.

ಮಾನ್ಯ ಮಂತ್ರಿಗಳು ಈಗ ದಯವಿಟ್ಟು ವಿಧೇಯಕವನ್ನು ಮಂಡಿ ಸಬೇಕು.

ಶ್ರೀ ಸಿ.ಟಿ. ರವಿ (ಉನ್ನತ ಶಿಕ್ಷಣ ಸಚಿವರು) :– ಮಾನ್ಯ ಅಧ್ಯಕ್ಷರೆ, 2012ನೇ ಸಾಲಿನ ಆದಿಚುಂಚನಗಿರಿ ವಿಶ್ವವಿದ್ಯಾಲಯ ವಿಧೇಯಕವನ್ನು ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ–4)

II ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1. ಕರ್ನಾಟಕ ಭೂಕಂದಾಯ (ಎರಡನೇ ತಿದ್ದುಪಡಿ)ವಿಧೇಯಕ 2012 ಪರ್ಯಾಲೋಚನಾ ಪ್ರಸ್ತಾವ

ಶ್ರೀ ಕೆ.ಎಸ್. ಈಶ್ವರಪ್ಪ, (ಉಪ ಮುಖ್ಯಮಂತ್ರಿ ಕಂದಾಯ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು) :– ಮಾನ್ಯ ಅಧ್ಯಕ್ಷರೆ, 2012ನೇ ಸಾಲಿನ ಕರ್ನಾಟಕ ಭೂಕಂದಾಯ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವವನ್ನು ಮಂಡಿಸಲಾಯಿತು. ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2012ನೇ ಸಾಲಿನ ಕರ್ನಾಟಕ ಭೂಕಂದಾಯ (ಎರಡನೇ ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಪರ್ಯಾಲೋಚಿಸುತ್ತದೆ ಎಂಬ ವಿಷಯ ಸಭೆಯ ಮುಂದೆ ಇದೆ.

ಪ್ರಸ್ತಾವದ ಪರವಾಗಿರುವವರು "ಹೌದು"ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ"ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು
ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವಕ್ಕೆ ಅನುಮೋದನೆ ದೊರಕಿದೆ
ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.